**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**05.05.2026 / 14.30 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆ ಪಾರದರ್ಶಕವಾಗಿಲ್ಲ- ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪ**

**೨. ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಉಪಚುನಾವಣೆಯಲ್ಲಿ ಪಕ್ಷಕ್ಕೆ ಗೆಲುವು - ಸಚಿವ ಆರ್.ಬಿ.ತಿಮ್ಮಾಪುರ್**

**೩. ರಾಜ್ಯದಲ್ಲಿ ಕಾಂಗ್ರೆಸ್‌ಗೆ ಭವಿಷ್ಯವಿಲ್ಲ- ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಭಿಮತ**

**೪. ಕುಡಿಯುವ ನೀರು ಸರಬರಾಜಿಗೆ ಅಡ್ಡಿ ಉಂಟು ಮಾಡಿದರೆ ಪ್ರಕರಣ ದಾಖಲಿಸುವಂತೆ ಸಚಿವ ಈಶ್ವರ್ ಖಂಡ್ರೆ ಅಧಿಕಾರಿಗಳಿಗೆ ಸೂಚನೆ**

**೫. ರಾಜ್ಯದ ಹಲವೆಡೆ ಇಂದು ಗುಡುಗು ಸಹಿತ ಮಳೆ; ಹವಾಮಾನ ಇಲಾಖೆ ಮುನ್ಸೂಚನೆ**

**<><*<><>*><>**

ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆಯ ಬಳಿಕ ಬಿಜೆಪಿ ಅಭ್ಯರ್ಥಿ ಗೆಲುವಿನ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೃಂಗೇರಿಯಲ್ಲಿ ತರಾತುರಿಯಲ್ಲಿ ಫಲಿತಾಂಶ ಘೋಷಣೆ ಮಾಡಲಾಗಿದೆ ಎಂದು ಆರೋಪಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ರಾಜೇಗೌಡ ಅವರು, ಕಳೆದ ವಿಧಾನಸಭಾ ಚುನಾವಣೆಯಲ್ಲಿ ೨೦೧ ಮತಗಳಿಂದ ಗೆದ್ದಿದ್ದರು. ಇದನ್ನು ಪ್ರಶ್ನಿಸಿ ಬಿಜೆಪಿ ಅಭ್ಯರ್ಥಿ ಜೀವರಾಜ್ ಚುನಾವಣಾ ಅಕ್ರಮ ಕುರಿತಂತೆ ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು. ಅದರಂತೆ ಮರು ಎಣಿಕೆ ನಡೆದಿದ್ದು, ೩೧೪ ಮತಗಳು ಮಾನ್ಯವಾಗಿವೆ. ೨೫೫ ಮತಗಳು ಅಮಾನ್ಯವಾಗಿವೆ. ಈಗ ಮರು ಎಣಿಕೆಯಲ್ಲಿ ಜೀವರಾಜ್ ಅವರಿಗೆ ೬೯೦ ಮತಗಳು ಲಭಿಸಿದ್ದು, ರಾಜೇಗೌಡರಿಗೆ ಬಿದ್ದಿದ್ದ ಮತಗಳನ್ನು ವ್ಯವಸ್ಥಿತವಾಗಿ ತಿದ್ದಲಾಗಿದೆ ಎಂದು ದೂರಿದ್ದಾರೆ.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ (  ಸೆಕೆಂಡ್ಸ್)**

ಕಾಂಗ್ರೆಸ್ ಅಭ್ಯರ್ಥಿ ರಾಜೇಗೌಡ ಅವರು ನೀಡಿದ ದೂರಿನ ಮೇಲೆ ಪ್ರಕರಣ ದಾಖಲಿಸಲಾಗಿದ್ದು, ನಿಷ್ಪಕ್ಷಪಾತವಾಗಿ ತನಿಖೆ ನಡೆಯಬೇಕು ಎಂದು ಆಗ್ರಹಿಸಿದ್ದಾರೆ. ಇದೇ ವೇಳೆ, ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರಗಳಿಗೆ ನಡೆದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದಿದ್ದು, ೨೦೨೮ ರ ಚುನಾವಣೆಗೆ ದಿಕ್ಸೂಚಿ ಎಂದು ಅಭಿಪ್ರಾಯಪಟ್ಟಿದ್ದು, ಸರ್ಕಾರದ ಗ್ಯಾರಂಟಿ ಯೋಜನೆಗಳು, ಪಕ್ಷದ ಕೈಹಿಡಿದಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಬಾಗಲಕೋಟೆ ಜಿಲ್ಲೆಯ ಮತದಾರರು ಕಾಂಗ್ರೆಸ್ ಪರವಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಗ್ಯಾರಂಟಿ ಯೋಜನೆಗಳು ಉಮೇಶ್ ಮೇಟಿ ಗೆಲುವಿಗೆ ಕಾರಣ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಇಲ್ಲ ಎಂದು ಹೇಳಿದ್ದಾರೆ. ಇದೆಲ್ಲ ಮಾಧ್ಯಮಗಳ ವರದಿ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ಕಾಂಗ್ರೆಸ್ ಮುಖಂಡರಾದ ನಸೀರ್ ಅಹ್ಮದ್ ಹಾಗೂ ಅಬ್ದುಲ್ ಜಬ್ಬರ್ ಅವರ ಅಮಾನತು ಹಿಂಪಡೆಯಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಸಚಿವ ಸ್ಥಾನಕ್ಕೆ ಕೇಳುವುದರಲ್ಲಿ ತಪ್ಪಿಲ್ಲ ಎಂದು ಅವರು ಇದೇ ವೇಳೆ ತಿಳಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಕಾಂಗ್ರೆಸ್‌ಗೆ ಭವಿಷ್ಯವಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಶ್ಚಿಮ ಬಂಗಾಳದಲ್ಲಿ ತೃಣಮೂಲ ಕಾಂಗ್ರೆಸ್ ಸೋತಂತೆ ರಾಜ್ಯದಲ್ಲಿಯೂ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಕೂಡ ಹೀನಾಯವಾಗಿ ಸೋಲು ಅನುಭವಿಸಲಿದೆ ಎಂದು ಭವಿಷ್ಯ ನುಡಿದಿದ್ದಾರೆ. ಪಂಚರಾಜ್ಯಗಳ ಚುನಾವಣಾ ಫಲಿತಾಂಶ ಐತಿಹಾಸಿಕವಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದ ಮೇಲಿನ ಜನರ ಬಲವಾದ ನಂಬಿಕೆಯನ್ನು ಮತ್ತೊಮ್ಮೆ ದೃಢಪಡಿಸಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ಬೇಸಿಗೆಯಲ್ಲಿ ಕುಡಿಯುವ ನೀರು ಸರಬರಾಜಿಗೆ ಅಡ್ಡಿಯನ್ನುಂಟು ಮಾಡುವವರ ವಿರುದ್ಧ ಅಧಿಕಾರಿಗಳು ಪ್ರಕರಣ ದಾಖಲಿಸುವಂತೆ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಸೂಚಿಸಿದ್ದಾರೆ. ಕುಡಿಯುವ ನೀರಿನ ಸಮಸ್ಯೆ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಯಾರು ಎಷ್ಟೇ ಪ್ರಭಾವಿಯಾಗಿದ್ದರೂ ಕುಡಿಯುವ ನೀರು ಸರಬರಾಜು ಮಾಡಲು ಅಡ್ಡಿ ಪಡಿಸಿದರೆ, ಅಧಿಕಾರಿಗಳು ನಿರ್ದಾಕ್ಷಿಣ್ಯವಾಗಿ ಪ್ರಕರಣ ದಾಖಲಿಸುವಂತೆ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಔರಾದ್, ಭಾಲ್ಕಿ, ಬಸವಕಲ್ಯಾಣ, ಕಮಲನಗರ ತಾಲ್ಲೂಕಿನಲ್ಲಿ ಹೆಚ್ಚಿನ ನೀರಿನ ಸಮಸ್ಯೆ ಕಂಡುಬಂದಿದೆ. ಔರಾದ್‌ನ ೧೪ ಗ್ರಾಮಗಳು ಕಮಲನಗರ ೧೧, ಬಸವಕಲ್ಯಾಣ ೧೦, ಭಾಲ್ಕಿಯ ೮ ಗ್ರಾಮ ಸೇರಿದಂತೆ ೪೩ ಗ್ರಾಮಗಳಲ್ಲಿ ನೀರು ಸಮಸ್ಯೆ ಉಲ್ಬಣಗೊಂಡಿದ್ದು ಅಧಿಕಾರಿಗಳು ಕ್ರಮ ವಹಿಸುವಂತೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ಬೇಸಿಗೆಯಲ್ಲಿ ಕುಡಿಯುವ ನೀರು ವ್ಯತ್ಯಯವಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಸೂಚಿಸಿದ್ದಾರೆ. ಅಧಿಕಾರಿಗಳೊಂದಿಗೆ ಇಂದು ಸಭೆ ನಡೆಸಿದ ಅವರು, ಬೇಸಿಗೆ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲೆಯ ಗ್ರಾಮಾಂತರ ಹಾಗೂ ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ಯಾವುದೇ ತೊಂದರೆಯುಂಟಾಗದಂತೆ ಅಗತ್ಯ ಕ್ರಮವಹಿಸಬೇಕು ಎಂದು ತಿಳಿಸಿದ್ದಾರೆ. ಕುಡಿಯುವ ನೀರಿನ ಯೋಜನೆಗಳಿಗೆ ನಿರಂತರ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡಲು ಹಾಗೂ ಕೃಷಿ ಪಂಪ್ ಸೆಟ್‌ಗಳಿಗೆ ೭ ಗಂಟೆಗಳ ಕಾಲ ಗುಣಮಟ್ಟದ ನಿರಂತರ ವಿದ್ಯುತ್ ಸರಬರಾಜು ಮಾಡಲು ಸಭೆಯಲ್ಲಿ ಸೂಚನೆ ನೀಡಿದ್ದಾರೆ. ಕಾವೇರಿ ನದಿ ಮತ್ತು ಹೇಮಾವತಿ ನದಿಯ ಮೂಲಕ ಕುಡಿಯುವ ನೀರನ್ನು ಎತ್ತುವಳಿ ಮಾಡುವ ಹಿನ್ನೆಲೆಯಲ್ಲಿ ನದಿ ತೀರದಲ್ಲಿ ಅನಧಿಕೃತವಾಗಿ ಹಾಕಿಕೊಂಡಿರುವ ಅಕ್ರಮ ಪಂಪ್ ಸೆಟ್‌ಗಳನ್ನು ತೆರವುಗೊಳಿಸಲು ನಿರ್ದೇಶನ ನೀಡಿದ್ದಾರೆ. ಕುಡಿಯುವ ನೀರಿನ ಯೋಜನೆಯನ್ನು ಹೊರತುಪಡಿಸಿ, ಇತರೆ ಗ್ರಾಮಗಳಲ್ಲಿನ ಕೊಳವೆ ಬಾವಿಗಳು, ಪಂಪ್ ಸೆಟ್ ಗಳು ಮತ್ತು ಓವರ್ ಟ್ಯಾಂಕ್ ಗಳನ್ನು ನಿಯಮಿತವಾಗಿ ಪರಿಶೀಲಿಸಿ, ಯಾವುದೇ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.

**<><*<><>*><>**

ದಾವಣಗೆರೆ ತಾಲ್ಲೂಕಿನ ಮಾಯಕೊಂಡ "ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಮೊದಲ ಆದ್ಯತೆ ನೀಡಲಾಗಿದ್ದು, ಸಮಸ್ಯೆ ಇರುವ ಕಡೆಗಳಲ್ಲಿ ತಕ್ಷಣವೇ ಕೊಳವೆಬಾವಿ ಕೊರೆಸಿ ನೀರು ಪೂರೈಸಲು ಕ್ರಮ ಕೈಗೊಳ್ಳಲಾಗುವುದು" ಎಂದು ಶಾಸಕ ಕೆ.ಎಸ್. ಬಸವಂತಪ್ಪ ತಿಳಿಸಿದ್ದಾರೆ. ಕಂದನಕೋವಿ ಗ್ರಾಮದಲ್ಲಿ ನೂತನ ಅಂಗನವಾಡಿ ಕೇಂದ್ರ ಉದ್ಘಾಟಿಸಿ

ಮಾತನಾಡಿದ ಅವರು, ನೀರಿನ ಸೌಲಭ್ಯ ಒದಗಿಸುವಲ್ಲಿ ವಿಳಂಬ ಧೋರಣೆ ತೋರದಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**<><*<><>*><>**

ಮಳೆಗಾಲದ ವೇಳೆ ನೀರು ನಿಲ್ಲುವ ತಗ್ಗು ಪ್ರದೇಶಗಳು ಹಾಗೂ ಹಾನಿಗೊಳಗಾಗುವ ಪ್ರದೇಶಗಳನ್ನು ಗುರುತಿಸಿ, ಸ್ಥಳೀಯ ನಿವಾಸಿಗಳೊಂದಿಗೆ ನಿರಂತರ ಸಂಪರ್ಕದಲ್ಲಿರಬೇಕೆಂದು ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತ ಡಾ.ರಾಜೇಂದ್ರ ಕೆ.ವಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಳೆಗಾಲ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಮಳೆಗಾಲದಲ್ಲಿ ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ ೧೧೨ ವಾರ್ಡ್‌ಗಳಲ್ಲಿ ಯಾವುದೇ ಅವಘಡಗಳು ಸಂಭವಿಸದಂತೆ ಎಲ್ಲಾ ತಂಡಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದ್ದು, ತಪ್ಪಿದ್ದಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಪಾಲಿಕೆ, ಅಗ್ನಿಶಾಮಕ ತುರ್ತು ಸೇವೆ ಹಾಗೂ ಪೊಲೀಸ್ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ, ಸಮಸ್ಯೆ ಇರುವ ಪ್ರದೇಶಗಳಲ್ಲಿ ಯಾವುದೇ ಅವಘಡಗಳು ಸಂಭವಿಸದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ರಾಜ್ಯದ ಹಲವೆಡೆ ಇಂದು ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಕನ್ನಡ ಜಿಲ್ಲೆಯ ಹಲವೆಡೆ ಗುಡುಗು ಸಹಿತ ಹಗುರ ಮಳೆಯಾಗಲಿದೆ. ಉತ್ತರ ಒಳನಾಡು ಜಿಲ್ಲೆಗಳಾದ ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳ ಕೆಲವೆಡೆ ಮಳೆಯಾಗಲಿದ್ದು, ಉಳಿದ ಜಿಲ್ಲೆಗಳಲ್ಲಿ ಒಣಹವೆ ಇರುವ ಸಾಧ್ಯತೆಯಿದೆ. ದಕ್ಷಿಣ ಒಳನಾಡು ಜಿಲ್ಲೆಗಳಾದ ಚಿಕ್ಕಮಗಳೂರು, ಹಾಸನ, ಕೊಡಗು, ಬಳ್ಳಾರಿ, ಮೈಸೂರು, ಮಂಡ್ಯ, ಚಾಮರಾಜನಗರ, ರಾಮನಗರ, ತುಮಕೂರು, ಬೆಂಗಳೂರು ನಗರ ಹಾಗೂ ಸುತ್ತಮುತ್ತ ಸೇರಿದಂತೆ ಹಲವೆಡೆ ಇಂದು ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ.

**<><*<><>*><>**

ಮನೆಗಳಲ್ಲಿ ಸಾಕುಪ್ರಾಣಿಗಳನ್ನು ಹೇಗೆ ಪೋಷಿಸುತ್ತೇವೆಯೋ, ಅದೇ ರೀತಿ ಗಿಡಮರಗಳನ್ನು ಪೋಷಿಸಿದಾಗ ಮಾತ್ರ ಪರಿಸರ ಉಳಿಸಲು ಸಾಧ್ಯ ಎಂದು ಕೋಲಾರದ ೩ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಶಿವಕುಮಾರ್ ಅಭಿಪ್ರಾಯಪಟ್ಟಿದ್ದಾರೆ. ಕೋಲಾರ ಜಿಲ್ಲೆಯ ಟಿ.ಗೊಲ್ಲಹಳ್ಳಿ ಹೊರವಲಯದ ಕೆರೆಯ ಅಂಗಳದಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ

ಮಾತನಾಡಿದ ಅವರು, ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಹಣ ದುಂದುವೆಚ್ಚ ಮಾಡುವ ಬದಲು, ನೆನಪಿನ ಸಂಕೇತವಾಗಿ ಗಿಡಗಳನ್ನು ವಿತರಿಸುವ ಮೂಲಕ ಪರಿಸರ ಸಂರಕ್ಷಣೆಗೆ ಒತ್ತು ನೀಡಬೇಕು ಎಂದು ಕರೆ ನೀಡಿದ್ದಾರೆ.

**<><*<><>*><>**

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಪರಿಸ್ಥಿತಿಯ ನಡುವೆಯೂ ದೇಶದ ಯಾವುದೇ ಎಲ್‌ಪಿಜಿ ವಿತರಣಾ ಕೇಂದ್ರಗಳಲ್ಲಿ ದಾಸ್ತಾನು ಕೊರತೆಯಾಗಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ಪೆಟ್ರೋಲಿಯಂ ಉತ್ಪನ್ನಗಳು ಮತ್ತು ಎಲ್‌ಪಿಜಿ ಸಿಲಿಂಡರ್‌ಗಳ ನಿರಂತರ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಸರ್ಕಾರ ಭರವಸೆ ನೀಡಿದೆ. ನವದೆಹಲಿಯಲ್ಲಿ ನಡೆದ ಅಂತರ್-ಸಚಿವಾಲಯದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಧಿಕಾರಿಗಳು, ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಖರೀದಿಯ ವಿಷಯದಲ್ಲಿ ಸಾರ್ವಜನಿಕರು ಆತಂಕಕ್ಕೆ ಒಳಗಾಗಬಾರದು ಹಾಗೂ ಅಧಿಕೃತ ಮೂಲಗಳ ಮಾಹಿತಿಯನ್ನು ಮಾತ್ರ ನಂಬಬೇಕು ಎಂದು ಮನವಿ ಮಾಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**